ಎಂ ವಿ ಸಿ ನಂಃ 15/2024
ಪಿ ಡಬ್ಲ್ಯುಃ 2

ದಿನಾಂಕಃ**21-02-2026** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಮಾಡಿಸಲಾಯಿತು.

ಮಧ್ಯಂತರ ಅರ್ಜಿ-**1** ಕಾಲ ವಿಳಂಬ ಮನ್ನಾ ಅರ್ಜಿಯ ಮೇಲೆ ಅರ್ಜಿದಾರರ ಮುಖ್ಯ ವಿಚಾರಣೆ.

ಮುಖ್ಯವಿಚಾರಣೆಃ ಅರ್ಜಿದಾರರ ಪರ ಶ್ರೀ ಬಿಸಿವಿಎಸ್ ವಕೀಲರಿಂದಃ

ನಾನು ಈ ಕೇಸಿನಲ್ಲಿ ಅರ್ಜಿದಾರನಾಗಿದ್ದು, ನನ್ನ ಸಾಕ್ಷ್ಯದ ಮುಖ್ಯವಿಚಾರಣೆಯಾಗಿ ಪ್ರಮಾಣಪತ್ರವನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಪ್ರಮಾಣಪತ್ರದಲ್ಲಿ ಬರೆದಿರುವ ವಿಷಯಗಳು ನನಗೆ ತಿಳಿದಿದೆ ಮತ್ತು ಸತ್ಯವಾಗಿದೆ.

ಆದುದರಿಂದ ಕಾಲ ವಿಳಂಬ ಅರ್ಜಿಯನ್ನು ಮನ್ನಾ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ.

ಪಾಟೀ ಸವಾಲುಃ **2** ನೇ ಎದುರುದಾರರ ಪರ ಶ್ರೀಮತಿ ಎಸ್.ಎಂ ವಕೀಲರಿಂದ

ನಾನು 10 ನೇ ತರಗತಿಯವರೆಗೆ ಓದಿರುತ್ತೇನೆ. ನಾನು ಪರಿಹಾರ ಕೋರಿ ಅರ್ಜಿಯನ್ನು ಒಂದು ತಿಂಗಳು ಮೂರು ದಿನಗಳ ನಂತರ ಸಲ್ಲಿಸಿರುತ್ತೇನೆ ಎಂದರೆ ಸರಿ. ನಾನು ಸಲ್ಲಿಸಿದ ಅರ್ಜಿ ಮೋಟಾರ್ ವಾಹನ ಕಾಯಿದೆ ತಿದ್ದುಪಡಿ ವ್ಯಾಪ್ತಿಯಲ್ಲಿ ಬರುತ್ತದೆ ಎಂದರೆ ನನಗೆ ಗೊತ್ತಿರುವುದಿಲ್ಲ. ನಾನು ಮಧ್ಯಂತರ ಅರ್ಜಿಯಲ್ಲಿ ಕಾಲವಿಳಂಬ ಮನ್ನ ಮಾಡುವಂತೆ ಯಾವುದೇ ಸಕಾರಣಗಳನ್ನು ತಿಳಿಸಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಅಪಘಾತದ ನಂತರ ಬೆಡ್ ರಿಡನ್ ಆಗಿದ್ದೆ ಎಂದು ಸುಳ್ಳು ಹೇಳಿರುತ್ತೇನೆ ಎಂದರೆ ಸರಿಯಲ್ಲ. ನನ್ನ ಅರ್ಜಿಯಲ್ಲಿ ಪರಿಹಾರ ಕೋರಿದ ಅರ್ಜಿಯಲ್ಲಿ ಕಾಲವಿಳಂಬದ ಬಗ್ಗೆ ತಿಳಿಸಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಸತ್ಯವನ್ನು ಮರೆಮಾಚಿ ಅರ್ಜಿಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು 2 ನೇ ಎದುರುದಾರರ ಮೇಲೆ ಯಾವುದೇ ಪರಿಹಾರದ ಹಣ ಕೇಳಲು ಮತ್ತು ಪಡೆಯಲು ಬರುವುದಿಲ್ಲ ಎಂದರೆ ಸರಿಯಲ್ಲ. ನಾನು ಸಲ್ಲಿಸಿದ ಮಧ್ಯಂತರ ಅರ್ಜಿ ಕಾನೂನಿನ ಅಡಿ ಮಾನ್ಯ ಮಾಡಲು ಬರುವುದಿಲ್ಲ ಎಂದರೆ ಸರಿಯಲ್ಲ. ಆದುದರಿಂದ ನನ್ನ ಅರ್ಜಿ ಕಾನೂನಿನಡಿ ಮಾನ್ಯ ಆಗುವುದಿಲ್ಲ ಎಂದರೆ ಸರಿಯಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಗಿದೆ.)

ಓ ಹೇ ಕೇ ಸ ಇ ಎ ಒ

Sd/-
ಹಿರಿಯ ಸಿವಿಲ್ ನ್ಯಾಯಾಧೀಶರುಃ ನ.ರಾ.ಪುರ,
ಸಂಚಾರಿ ನ್ಯಾಯಾಲಯ, ಕೊಪ್ಪ.

ಸಾಕ್ಷಿದಾರರ ಸಹಿಃ